ಹಣಕಾಸಿನ ಕೊರತೆಯಿರುವುದರಿಂದ ನೇಕಾರರಿಗೆ ಪರಿವರ್ತನಾ ದರ ನೀಡುವಲ್ಲಿ ವಿಳಂಬವಾಗಿ ನೇಕಾರರಿಗೆ ಸ್ವಲ್ಪ ತೊಂದರೆಯಾಗಿದೆ. ಪ್ರಸಕ್ತ ವರ್ಷದಲ್ಲಿ ನಿಗಮಕ್ಕೆ ವಿದ್ಯಾ ವಿಕಾಸ ಯೋಜನೆಯಡಿಯಲ್ಲಿ ರೂ. 50 ಕೋಟಿಗಳ ಆದೇಶ ನೀಡಲಾಗಿದೆ. ಅಗ್ಗದರದ ಸೀರೆ ಪಂಚೆ ಯೋಜನೆಯನ್ನು ಮುಂದುವರೆಸಲಾಗಿದ್ದು ರಾಜ್ಯ ಸರ್ಕಾರವು ಈ ಯೋಜನೆಯಡಿಯಲ್ಲಿ ಇಲ್ಲಿಯವರೆಗೆ ರೂ. 202.50 ಲಕ್ಷಗಳನ್ನು ಮುಂಗಡವಾಗಿ ಬಿಡುಗಡೆ ಮಾಡಿದೆ. ವಿದ್ಯಾ ವಿಕಾಸ ಯೋಜನೆಯಡಿ ಮುಂಗಡ ಬಿಡುಗಡೆಯಾದ ನಂತರ ನೇಕಾರರಿಗೆ ನೂಲು ವಿತರಿಸಲು ಪರಿವರ್ತನಾ ದರವನ್ನು ನೀಡಲು ಕ್ರಮ ತೆಗೆದುಕೊಳ್ಳಲಾಗುವುದು.

ಕೆ.ಜಿ.ಎಫ್. ಕ್ಷೇತ್ರದಲ್ಲಿ ಅಂಬೇಡ್ಕರ್ ಯೋಜನೆಯಡಿ ಮನೆಗಳ ನಿರ್ಮಾಣ

276(2626) ಶ್ರೀ ಎಂ. ಭಕ್ತವತ್ಸಲಂ (ಕೆ.ಜಿ.ಎಫ್.) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1) ಕೆ.ಜಿ.ಎಫ್. ಮತಕ್ಷೇತ್ರದಲ್ಲಿ ಡಾ।। ಅಂಬೇಡ್ಕರ್ ವಸತಿ ಯೋಜನೆಯಡಿ ಕಳೆದ ಮೂರು ವರ್ಷಗಳಲ್ಲಿ ನಿರ್ಮಿಸಿದ ಮನೆಗಳ ಸಂಖ್ಯೆ ಎಷ್ಟು?

2) ಈ ಯೋಜನೆಗೆ ಬಿಡುಗಡೆ ಮಾಡಿದ ಹಣ ಎಷ್ಟು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

1) ಅಂಬೇಡ್ಕರ್ ವಸತಿ ಯೋಜನೆಯನ್ನು 2000-01 ರಿಂದ ಗ್ರಾಮೀಣ ಪ್ರದೇಶಗಳಲ್ಲಿ ಮಾತ್ರ ಅನುಷ್ಠಾನಗೊಳಿಸಲಾಗುತ್ತಿದೆ. ಆದರಂತೆ ಕೆ.ಜಿ.ಎಫ್. ಮತಕ್ಷೇತ್ರವು ನಗರ ಪ್ರದೇಶದ ವ್ಯಾಪ್ತಿಯಲ್ಲಿ ಬರುವುದರಿಂದ ಅಂಬೇಡ್ಕರ್ ವಸತಿ ಯೋಜನೆಯಡಿ ಮನೆಗಳ ನಿರ್ಮಾಣ ಕಾರ್ಯ ಕೈಗೊಂಡಿರುವುದಿಲ್ಲ. ಆದಾಗ್ಯೂ ಕೆ.ಜಿ.ಎಫ್. ನಗರ ಪ್ರದೇಶದಲ್ಲಿ ಆಶ್ರಯ ಯೋಜನೆ ಅಡಿಯಲ್ಲಿ ಮನೆಗಳನ್ನು ಕಟ್ಟಲಾಗುವುದು.

2) ಉದ್ಭವಿಸುವುದಿಲ್ಲ.

ಹುಬ್ಬಳ್ಳಿಯಲ್ಲಿ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ

277(2525) ಶ್ರೀ ಪಾಟೀಲ್ ಸಿದ್ದಲಿಂಗನಗೌಡ ಸಿದ್ದನಗೌಡ (ಮುಂಡರಗಿ) : ಮಾನ್ಯ ಸಣ್ಣ ಕೈಗಾರಿಕೆ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹುಬ್ಬಳ್ಳಿಯಲ್ಲಿರುವ ಸರ್ಕಾರಿ ಉಪಕರಣಾಗಾರ (ಉಪ ಕೇಂದ್ರ) ಪ್ರಾರಂಭವಾಗಿದ್ದು ಯಾವಾಗ?

ಆ) ಅಲ್ಲಿ ಯಾವ ಯಾವ ತರಬೇತಿಗಳನ್ನು ನೀಡಲಾಗುತ್ತಿದೆ, ಇಲ್ಲಿಯವರೆಗೆ ಯಶಸ್ವಿಯಾಗಿ ತರಬೇತಿ ಮುಗಿಸಿದ ಅಭ್ಯರ್ಥಿಗಳ ಸಂಖ್ಯೆ ಎಷ್ಟು; (ಅವರಲ್ಲಿ ಎಸ್‌ಸಿ:ಎಸ್‌ಟಿ, ಹಿಂದುಳಿದ ವರ್ಗ ಹಾಗೂ ಸಾಮಾನ್ಯ ವರ್ಗದ ಪೂರ್ಣ ವಿವರ ನೀಡುವುದು)?

ಇ) ಯಶಸ್ವಿಯಾಗಿ ತರಬೇತಿ ಮುಗಿಸಿದ ಅಭ್ಯರ್ಥಿಗಳು ಯಾವ ಯಾವ ಉದ್ಯೋಗದಲ್ಲಿದ್ದಾರೆ; (ವಿವರ ನೀಡುವುದು)?

ಶ್ರೀ ಆರ್. ರೋಷನ್‌ಬೇಗ್ (ಸಣ್ಣ ಕೈಗಾರಿಕೆ ಮತ್ತು ಹಜ್ ಸಚಿವರು):

ಅ) ಹುಬ್ಬಳ್ಳಿಯಲ್ಲಿರುವ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರವು ದಿ: 7-9-1998 ರಂದು ಪ್ರಾರಂಭವಾಯಿತು.